**All India Radio: Bangalore**
**Regional Bulletin In Kannada**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**02.08.2026 / 2.30 p.m.**
**<><><><>**

ಮುಖ್ಯಾಂಶಗಳು

1. ಕಾವೇರಿ ಜಲ ವಿವಾದ : ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಸರ್ವಪಕ್ಷ ಸಭೆ : ಕನ್ನಡಿಗರ ಹಿತ ಕಾಯಲು ಬದ್ಧ : ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್
2. ಕರ್ನಾಟಕದ ಹಿತಾಸಕ್ತಿ ರಕ್ಷಣೆ ನಿಟ್ಟಿನಲ್ಲಿ ನಿರ್ಧಾರ ತೆಗೆದುಕೊಳ್ಳುವಂತೆ ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್‌ಗೆ, ಬಿ.ವೈ.ವಿಜಯೇಂದ್ರ ಮನವಿ
3. ನೀರು ವ್ಯರ್ಥವಾಗದಂತೆ ಕಾಲುವೆಗಳ ತ್ವರಿತ ನಿರ್ವಹಣೆಗೆ ಅಧಿಕಾರಿಗಳಿಗೆ ಸಚಿವ ಸತೀಶ್ ಜಾರಕಿಹೊಳಿ ನಿರ್ದೇಶನ
4. ಪೊಲೀಸ್ ಪೇದೆ ಹುದ್ದೆಗಳ ನೇಮಕಾತಿಗಾಗಿ ರಾಜ್ಯಾದ್ಯಂತ ಇಂದು ಲಿಖಿತ ಪರೀಕ್ಷೆ

<><><><>

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಧ್ಯಕ್ಷತೆಯಲ್ಲಿ ಗೃಹ ಕಚೇರಿ ಕೃಷ್ಣಾದಲ್ಲಿ ಇಂದು ಕಾವೇರಿ ನದಿ ನೀರಿನ ವಿಷಯಕ್ಕೆ ಸಂಬಂಧಿಸಿದಂತೆ ಸರ್ವಪಕ್ಷ ಸಭೆ ನಡೆಯಿತು. ಮಾಜಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ, ಬಿಎಸ್ ಯಡಿಯೂರಪ್ಪ, ಹೆಚ್.ಡಿ.ಕುಮಾರಸ್ವಾಮಿ, ಸದಾನಂದಗೌಡ, ಬಸವರಾಜ ಬೊಮ್ಮಾಯಿ, ಕೇಂದ್ರ ಸಚಿವರಾದ ವಿ.ಸೋಮಣ್ಣ, ಶೋಭಾ ಕರಂದ್ಲಾಜೆ, ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಸಚಿವರಾದ ರಾಮಲಿಂಗಾರೆಡ್ಡಿ, ಕೃಷ್ಣಬೈರೇಗೌಡ, ಎಂ.ಬಿ.ಪಾಟೀಲ್, ಕೆ.ಜೆ.ಜಾರ್ಜ್, ಸಂಸದ ಗೋವಿಂದ ಕಾರಜೋಳ, ವಿರೋಧ ಪಕ್ಷದ ನಾಯಕ ಆರ್.ಅಶೋಕ, ಛಲವಾದಿ ನಾರಾಯಣಸ್ವಾಮಿ, ನಿವೃತ್ತ ನ್ಯಾಯಾಧೀಶ ನಾಗಮೋಹನ್ ದಾಸ್, ಅಡ್ವೋಕೇಟ್ ಜನರಲ್ ಶಶಿಕಿರಣ್ ಶೆಟ್ಟಿ ಸೇರಿದಂತೆ ಹಿರಿಯ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

<><><><>

ಜಲ - ನಾಡು - ನುಡಿ ವಿಚಾರ ಬಂದಾಗ ಎಲ್ಲರೂ ಪಕ್ಷ ಬೇಧ ಮರೆತು ಒಗ್ಗಟ್ಟಿನಿಂದ ನಿಲ್ಲಬೇಕು ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ಕಾವೇರಿ ಜಲವಿವಾದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಇಂದು ನಡೆದ ಸರ್ವಪಕ್ಷ ಸಭೆ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಕಾವೇರಿ ವಿಚಾರವಾಗಿ ರಾಜ್ಯಕ್ಕೆ ತಲೆದೋರಿರುವ ಸಮಸ್ಯೆಯನ್ನು ಎದುರಿಸುವ ನಿಟ್ಟಿನಲ್ಲಿ ಇಂದು ಚರ್ಚಿಸಿ,

ಸಮಾಲೋಚನೆ ನಡೆಸಲಾಯಿತು ಎಂದು ತಿಳಿಸಿದ್ದಾರೆ. ಜನರಿಗೆ ಯಾವುದೇ ರೀತಿಯಲ್ಲಿ ತೊಂದರೆಯಾಗದಂತೆ ಎಲ್ಲ ಕಾನೂನಾತ್ಮಕ ಅವಕಾಶಗಳನ್ನು ಬಳಕೆ ಮಾಡಿಕೊಂಡು ಕನ್ನಡಿಗರ ಹಿತ ಕಾಯಲು ಬದ್ಧರಿದ್ದೇವೆ ಎಂದು ಡಾ.ಜಿ.ಪರಮೇಶ್ವರ್ ಭರವಸೆ ನೀಡಿದ್ದಾರೆ.

<><><>

ಕಾವೇರಿ ನದಿ ನೀರಿನ ವಿಚಾರದಲ್ಲಿ ಕರ್ನಾಟಕದ ಜನರ ಹಿತ ಕಾಪಾಡುವಂತಹ ನಿರ್ಧಾರ ತೆಗೆದುಕೊಳ್ಳುವಂತೆ ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ ಅವರಿಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಪತ್ರ ಬರೆದಿದ್ದಾರೆ. ತಮಿಳುನಾಡಿಗೆ ಗೌರವ ನೀಡುತ್ತಾ, ಕರ್ನಾಟಕದ ಹಿತಾಸಕ್ತಿ ರಕ್ಷಿಸುವ ಮೂಲಕ ಉಭಯ ರಾಜ್ಯಗಳ ಐತಿಹಾಸಿಕ ಬಾಂಧವ್ಯಕ್ಕೆ ನೆರವಾಗುವ ನಿಟ್ಟಿನಲ್ಲಿ ಜೋಸೆಫ್ ವಿಜಯ್ ನಿಲುವು ತೆಗೆದುಕೊಳ್ಳುವ ವಿಶ್ವಾಸವಿದೆ ಎಂದಿದ್ದಾರೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಭೇಟಿ ವೇಳೆಯಲ್ಲಿ ಕರ್ನಾಟಕದ ರೈತರು ಹಾಗೂ ನಾಗರಿಕರ ಹಿತ ರಕ್ಷಣೆಗೆ ಗಮನ ಹರಿಸಬೇಕಾಗಿದೆ ಎಂದು ಅವರು ಒತ್ತಾಯಿಸಿದರು. ಕಾವೇರಿ ಮಹಾನಗರ ಬೆಂಗಳೂರು ಮತ್ತು ಅಚ್ಚುಕಟ್ಟು ಪ್ರದೇಶದ ಅನೇಕ ಪಟ್ಟಣಗಳ ಕೋಟ್ಯಾಂತರ ಜನರ ಜೀವನಾಡಿಯಾಗಿದೆ. ಕರ್ನಾಟಕದಲ್ಲಿ ವಾಸಿಸುತ್ತಿರುವ ಕನ್ನಡಿಗರು ಮತ್ತು ತಮಿಳರು ಕುಡಿಯುವ ನೀರಿಗಾಗಿ ಕಾವೇರಿಯನ್ನೇ ಅವಲಂಬಿಸಿದ್ದಾರೆ. ಬರದ ಸಂದರ್ಭದಲ್ಲಿ ರೈತರು, ನಾಗರಿಕರು ನೀರಿಗಾಗಿ ಸಂಕಷ್ಟ ಪಡುತ್ತಿದ್ದು, ಇಂತಹ ಸಂದರ್ಭದಲ್ಲಿ ಸೂಕ್ತ ನಿರ್ಧಾರ ಕೈಗೊಳ್ಳಬೇಕಾಗಿದೆ. ಮೇಕೆದಾಟು ಯೋಜನೆಗೂ ಸಹಕಾರ ನೀಡಬೇಕಾಗಿದೆ ಎಂದು ಅವರು ಮನವಿ ಮಾಡಿದರು.

<><><>

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ಅಧ್ಯಕ್ಷತೆಯಲ್ಲಿ ಇಂದು ಬಿಜೆಪಿ ಕೋರ್ ಕಮಿಟಿ ಸಭೆ ನಡೆಯಿತು. ಬಿಜೆಪಿ ರಾಜ್ಯ ಕಾರ್ಯಾಲಯದಲ್ಲಿ ನಡೆದ ಸಭೆಯಲ್ಲಿ ರಾಜ್ಯ ಉಸ್ತುವಾರಿ ಮತ್ತು ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಡಾ.ರಾಧಾ ಮೋಹನ್‌ದಾಸ್ ಅಗರ್ ವಾಲ್, ಬಿಜೆಪಿ ಕೇಂದ್ರೀಯ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ, ಸಂಸದ ಬಸವರಾಜ ಬೊಮ್ಮಾಯಿ, ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದಗೌಡ, ವಿರೋಧ ಪಕ್ಷದ ನಾಯಕರಾದ ಆರ್.ಅಶೋಕ, ಛಲವಾದಿ ನಾರಾಯಣಸ್ವಾಮಿ ಮತ್ತಿತತರು ಉಪಸ್ಥಿತರಿದ್ದರು.

<><><>

ಸಂತ ಶಿರೋಮಣಿ ಗುರು ಶ್ರೀ ರವಿದಾಸರ ೬೫೦ನೇ ವರ್ಷದ ಜಯಂತಿ ಅಂಗವಾಗಿ ದೇಶಾದ್ಯಂತ ಶ್ರೀ ಗುರು ರವಿದಾಸ್ ಮಹಾರಾಜ್ ಅವರ ಕಳಶ ವಂದನೆ ಅಭಿಯಾನ ಹಾಗೂ ಯಾತ್ರೆ ವಿಜೃಂಭಣೆಯಿಂದ ನಡೆಯುತ್ತಿದೆ.

ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಎಲ್ಲಾ ರಾಜ್ಯಗಳಿಗೆ ಪವಿತ್ರ ಕಳಶವನ್ನು ಕಳುಹಿಸಿದ್ದು, ಬೆಂಗಳೂರಿನ ಕಾಡುಮಲ್ಲೇಶ್ವರ ದೇವಸ್ಥಾನದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಕಳಶವನ್ನು ಸ್ವೀಕರಿಸಿದರು. ಬಳಿಕ ಅವರು ಮಾತನಾಡಿ, ಸಮ ಸಮಾಜ ನಿರ್ಮಾಣ ಮಾಡಬೇಕು ಎಂಬ ಸಂದೇಶವನ್ನು ರಾಜ್ಯದ ಮೂಲೆ ಮೂಲೆಗೆ ಹರಡಲಿದ್ದಾರೆ. ಈ ಸಂಬಂಧ ಜಾಗೃತಿ ಮೂಡಿಸಲು ಎಲ್ಲಾ ಕಾರ್ಯಗಳನ್ನು ಪಕ್ಷದ ಕಾರ್ಯಕರ್ತರು ಮಾಡಲಿದ್ದಾರೆ ಎಂದರು. ರಾಜ್ಯ ಉಸ್ತುವಾರಿ ಡಾ.ರಾಧಾ ಮೋಹನ್‌ದಾಸ್ ಸಿಂಗ್, ಸಹ ಉಸ್ತುವಾರಿ ಪಿ.ಸುಧಾಕರರೆಡ್ಡಿ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<><><>

ಮಂಡ್ಯ-ಕೊಡಗಿನಲ್ಲಿ ಭಾರೀ ಮಳೆಯಾಗುತ್ತಿರುವ ಪರಿಣಾಮ ಮಂಡ್ಯ ಜಿಲ್ಲೆಯ ಕೆ.ಆರ್.ಎಸ್. ಜಲಾಶಯದ ಒಳ ಹರಿವಿನಲ್ಲಿ ವ್ಯಾಪಕ ಹೆಚ್ಚಳ ಕಂಡಿದೆ. ಒಟ್ಟು ೧೨೪.೮೦ ಅಡಿ ನೀರಿನ ಸಂಗ್ರಹ ಸಾಮರ್ಥ್ಯದ ಕೆ.ಆರ್.ಎಸ್ ಜಲಾಶಯದಲ್ಲಿನ ಇಂದಿನ ನೀರಿನ ಮಟ್ಟ ೯೬.೯೦ ಅಡಿ ಇದೆ. ಕೊಡಗು ಮತ್ತು ಕಬಿನಿ ಜಲಾಶಯದಿಂದ ಹೆಚ್ಚಿನ ನೀರು ಹರಿದು ಬರುತ್ತಿರುವುದರಿಂದ ಅಣೆಕಟ್ಟಿನ ನೀರಿನ ಒಳ ಹರಿವು ೨೦ ಸಾವಿರದ ೪೭೭ ಕ್ಯೂಸೆಕ್ ಇದೆ. ನೀರಿನ ಹೊರ ಹರಿವು ೧ ಸಾವಿರದ ೭೬೬ ಕ್ಯೂಸೆಕ್ ಇದೆ.

<><><>

ರೈತರ ಹಿತದೃಷ್ಟಿಯಿಂದ ಕಾಲುವೆಯ ದುರಸ್ತಿ ಹಾಗೂ ನಿರ್ವಹಣಾ ಕಾರ್ಯಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಿ, ಯಾವುದೇ ರೀತಿಯ ನೀರು ವ್ಯರ್ಥವಾಗದಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲೂಕಿನ ಹಿರಣ್ಯಕೇಶಿ ನದಿಯಿಂದ ಜಿಆರ್‌ಬಿಸಿ ಕಾಲುವೆಗೆ ನೀರು ಎತ್ತುವ ಯೋಜನೆಯ ಪಂಪ್ ಹೌಸ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ ಬಳಿಕ ಮಾತನಾಡಿದ ಸಚಿವರು, ನೀರು ಪೋಲಾಗದಂತೆ ನೋಡಿಕೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು. ಬಳಿಕ ಘೋಡಗೇರಿ, ಮೇಲ್ಮಟ್ಟಿ, ಗೋಡಚಿನಮಲ್ಕಿ ಸೇರಿದಂತೆ ಜಿಆರ್‌ಬಿಸಿ ಕಾಲುವೆಯ ವಿವಿಧ ಭಾಗಗಳಿಗೆ ಭೇಟಿ ನೀಡಿ, ಕಾಲುವೆಯ ದುರಸ್ತಿ ಕಾಮಗಾರಿಗಳು, ನೀರಿನ ಸೋರಿಕೆ ಉಂಟಾಗಿರುವ ಸ್ಥಳಗಳು ಹಾಗೂ ನೀರು ಸರಾಗವಾಗಿ ಹರಿಯುವ ವ್ಯವಸ್ಥೆಯನ್ನು ಪರಿಶೀಲಿಸಿದರು.

<><><>

ರಾಜ್ಯಾದ್ಯಂತ ಇಂದು ನಾಗರಿಕ ಪೊಲೀಸ್ ಪೇದೆ ಹುದ್ದೆಗಳ ನೇಮಕಾತಿಗಾಗಿ ಲಿಖಿತ ಪರೀಕ್ಷೆ ನಡೆಯುತ್ತಿದೆ. ಸುಗಮ ಪರೀಕ್ಷೆಗಾಗಿ ಬಿಗಿ ಬಂದೋಬಸ್ತ್ ಕಲ್ಪಿಸಲಾಗಿದೆ. ಬೆಳಗಾವಿ ಜಿಲ್ಲೆಯ ೬೧ ಕೇಂದ್ರಗಳಲ್ಲಿ ಸುಮಾರು ೨೫ ಸಾವಿರಕ್ಕೂ ಅಧಿಕ ಸಂಖ್ಯೆಯಲ್ಲಿ ಅಭ್ಯರ್ಥಿಗಳು ಪರೀಕ್ಷೆ

ಎದುರಿಸುತ್ತಿದ್ದಾರೆ. ಪರೀಕ್ಷಾ ಕೇಂದ್ರಗಳಿಗೆ ಜಿಲ್ಲಾಧಿಕಾರಿ ಮೊಹಮ್ಮದ ರೋಷನ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳ ತಂಡ ಖುದ್ದು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ೭ ಪರೀಕ್ಷಾ ಕೇಂದ್ರಗಳಲ್ಲಿ ೩ ಸಾವಿರದ ೪೬೩ ಅಭ್ಯರ್ಥಿಗಳು ಪರೀಕ್ಷೆ ಬರೆಯುತ್ತಿದ್ದು, ಮುಂಜಾಗ್ರತಾ ಕ್ರಮವಾಗಿ ಪೊಲೀಸ್ ಭದ್ರತಾ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಕೆ.ಎನ್.ಅನುರಾಧ ತಿಳಿಸಿದ್ದಾರೆ. ದಾವಣಗೆರೆ ನಗರದ ಒಟ್ಟು ೧೯ ಪರೀಕ್ಷಾ ಕೇಂದ್ರಗಳಲ್ಲಿ ಆಯೋಜಿಸಲಾದ ಈ ಪರೀಕ್ಷೆಗೆ ಅಭ್ಯರ್ಥಿಗಳಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಯಿತು. ಪರೀಕ್ಷೆಗಾಗಿ ೧೧ ಸಾವಿರದ ೩೧ ಅಭ್ಯರ್ಥಿಗಳು ಹೆಸರು ನೊಂದಾಯಿಸಿದ್ದರು. ಈ ಪೈಕಿ ೫೫೯ ಅಭ್ಯರ್ಥಿಗಳು ಗೈರಾಗಿದ್ದರು ಎಂದು ವರದಿಯಾಗಿದೆ. ಚಿಕ್ಕಬಳ್ಳಾಪುರ ಜಿಲ್ಲೆಯ ೯ ಕೇಂದ್ರಗಳಲ್ಲಿ ಪರೀಕ್ಷೆ ನಡೆಯುತ್ತಿದ್ದು, ಒಟ್ಟು ೪ ಸಾವಿರದ ೫೨೬ ಅಭ್ಯರ್ಥಿಗಳು ಪರೀಕ್ಷೆ ಬರೆಯಲು ನೋಂದಾಯಿಸಿಕೊಂಡಿದ್ದಾರೆ ಎಂದು ಜಿಲ್ಲಾಧಿಕಾರಿ ಜಿ.ಪ್ರಭು ತಿಳಿಸಿದ್ದಾರೆ.

<><><><>

ಚಿತ್ರದುರ್ಗ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ, ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಪರಿಶಿಷ್ಟ ಪಂಗಡದ ರೈತರಿಗೆ 'ಲಾಭದಾಯಕ ಸುಸ್ಥಿರ ಸಮಗ್ರ ಕೃಷಿ ಪದ್ಧತಿ' ಕುರಿತು ಮೂರು ದಿನಗಳ ಉಚಿತ ವಸತಿಯುಕ್ತ ತರಬೇತಿಯನ್ನು ಇದೇ ೫ರಿಂದ ೨ ದಿನ ಆಯೋಜಿಸಲಾಗಿದೆ. ತರಬೇತಿ ವೇಳೆ ಕೃಷಿ ಇಲಾಖೆಯ ಸಹಾಯಕ ಕೃಷಿ ನಿರ್ದೇಶಕ ಆರ್.ರಜನೀಕಾಂತ, ಸುಸ್ಥಿರ ಇಳುವರಿ ಹಾಗೂ ಪರ್ಯಾಯ ಬೆಳೆಗಳ ಕುರಿತು ಮಾಹಿತಿ ನೀಡಲಿದ್ದಾರೆ. ಹಿರಿಯ ಪಶುವೈದ್ಯಾಧಿಕಾರಿ ಡಾ.ನಾಗರಾಜ್ ವೈಜ್ಞಾನಿಕ ಹೈನುಗಾರಿಕೆ, ಕುರಿ ಮತ್ತು ಮೇಕೆ ಸಾಕಾಣಿಕೆ ಬಗ್ಗೆ ಹಾಗೂ ಪ್ರಗತಿಪರ ಕೃಷಿಕ ಇಂದೂಧರ ಅವರು ಸಾವಯವ ಮತ್ತು ನೈಸರ್ಗಿಕ ಕೃಷಿ ಪದ್ಧತಿಗಳ ಕುರಿತು ಮಾರ್ಗದರ್ಶನ ನೀಡಲಿದ್ದಾರೆ. ಆಸಕ್ತ ಪರಿಶಿಷ್ಟ ಪಂಗಡದ ೪೩ ರೈತರು ತಮ್ಮ ಹೆಸರನ್ನು ನಾಳೆಯೊಳಗೆ ನೋಂದಾಯಿಸಿಕೊಳ್ಳಬೇಕಾಗಿದೆ. ನೋಂದಣಿಗಾಗಿ ೮೨೭೭೯೩೧೦೫೮ ಮೊಬೈಲ್ ಸಂಖ್ಯೆಯನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

<><><><>

ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಹಿರಿಯ ನಾಗರಿಕರು ಹಾಗೂ ಸಂಸ್ಥೆಗಳಿಗೆ ನೀಡಲಾಗುವ ರಾಜ್ಯ ಮಟ್ಟದ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ದಾವಣಗೆರೆ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಹಾಯಕ ನಿರ್ದೇಶಕಿ ರಶ್ಮಿ ತಿಳಿಸಿದ್ದಾರೆ. ಶಿಕ್ಷಣ, ಸಾಹಿತ್ಯ, ಕಲೆ, ಕಾನೂನು, ಕ್ರೀಡೆ, ಪ್ರತಿಭೆ ಹಾಗೂ ಸಮಾಜ ಸೇವೆ ಕ್ಷೇತ್ರದಲ್ಲಿ ಸಾಧನೆ ಮಾಡಿದ ಹಿರಿಯ

ನಾಗರಿಕರಿಗೆ ೬ ವೈಯಕ್ತಿಕ ಪ್ರಶಸ್ತಿ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ಒಂದು ಸಂಸ್ಥೆ ಸೇರಿದಂತೆ ಒಟ್ಟು ೭ ಪ್ರಶಸ್ತಿಗಳನ್ನು ನೀಡಲಾಗುವುದು. ಅರ್ಹ ಹಿರಿಯ ನಾಗರಿಕರು ಮತ್ತು ಸಂಸ್ಥೆಗಳು ನಮೂನೆ ೧ ಮತ್ತು ೨ರಲ್ಲಿ ದ್ವಿಪ್ರತಿಯಲ್ಲಿ ಅರ್ಜಿ ಸಲ್ಲಿಸಬೇಕು. ಭರ್ತಿ ಮಾಡಿದ ಅರ್ಜಿಗಳನ್ನು ಆಯಾ ಜಿಲ್ಲೆಯ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿಗಳ ಕಚೇರಿಗೆ ಇದೇ ೨೪ರೊಳಗೆ ಸಲ್ಲಿಸಲು ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>